Akashvani: Bangalore
National Bulletin In Kannada
14.02.2026 : 7.35AM
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

*******

ಮುಖ್ಯಾಂಶಗಳು:

1. ಅಸ್ಸಾಂಗೆ ಇಂದು ಪ್ರಧಾನಿ ನರೇಂದ್ರ ಮೋದಿ ಭೇಟಿ; ೫ ಸಾವಿರದ ೪೫೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಯೋಜನೆಗಳಿಗೆ ಚಾಲನೆ
2. ನವದೆಹಲಿಯಲ್ಲಿ ಇದೇ ೧೬ ರಿಂದ ನಡೆಯಲಿರುವ ಇಂಡಿಯಾ-ಎಐ ಇಂಪ್ಯಾಕ್ಟ್ ಶೃಂಗಸಭೆಯಲ್ಲಿ ವಿಶ್ವ ನಾಯಕರು ಭಾಗಿ
3. ಭಾರತ - ಅಮೆರಿಕ ವ್ಯಾಪಾರ ಒಪ್ಪಂದದ ಕುರಿತು ರಾಹುಲ್ ಗಾಂಧಿ ಆರೋಪ ಆಧಾರರಹಿತ - ಕೇಂದ್ರ ಸಚಿವ ಪಿಯೂಶ್ ಗೋಯಲ್
4. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್: ನೆದರ್‌ಲ್ಯಾಂಡ್ಸ್ ವಿರುದ್ಧ ಅಮೆರಿಕ ತಂಡಕ್ಕೆ ೯೩ ರನ್‌ಗಳ ಭರ್ಜರಿ ಗೆಲುವು

**********

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಅಸ್ಸಾಂಗೆ ಒಂದು ದಿನದ ಭೇಟಿ ನೀಡಲಿದ್ದಾರೆ. ಇಂದು ಬೆಳಗ್ಗೆ ೧೦:೩೦ ರ ಸುಮಾರಿಗೆ ಅವರು ದಿಬ್ರುಗಢ ಜಿಲ್ಲೆಯ ರಾಷ್ಟ್ರೀಯ ಹೆದ್ದಾರಿಯಲ್ಲಿ ಅಭಿವೃದ್ಧಿಪಡಿಸಲಾದ ಮೋರನ್ ಬೈಪಾಸ್‌ನಲ್ಲಿರುವ ತುರ್ತು ಲ್ಯಾಂಡಿಂಗ್ ಸೌಲಭ್ಯದಲ್ಲಿ ವಿಶೇಷ ವಿಮಾನದಲ್ಲಿ ಇಳಿಯಲಿದ್ದಾರೆ. ಅಲ್ಲಿ ಅವರು ಯುದ್ಧ ವಿಮಾನಗಳು, ಸಾರಿಗೆ ವಿಮಾನಗಳು ಮತ್ತು ಹೆಲಿಕಾಪ್ಟರ್‌ಗಳ ವೈಮಾನಿಕ ಪ್ರದರ್ಶನವನ್ನು ವೀಕ್ಷಿಸಲಿದ್ದಾರೆ. ತುರ್ತು ಸಂದರ್ಭಗಳಲ್ಲಿ ಮಿಲಿಟರಿ ಮತ್ತು ನಾಗರಿಕ ವಿಮಾನಗಳ ಲ್ಯಾಂಡಿಂಗ್ ಮತ್ತು ಟೇಕ್‌ಆಫ್ ಅನ್ನು ಬೆಂಬಲಿಸಲು ಭಾರತೀಯ ವಾಯುಪಡೆಯೊಂದಿಗೆ ಸಮನ್ವಯದಿಂದ ವಿನ್ಯಾಸಗೊಳಿಸಲಾದ ಮತ್ತು ನಿರ್ಮಿಸಲಾದ ಈಶಾನ್ಯ ಭಾರತದಲ್ಲಿ ತುರ್ತು ಲ್ಯಾಂಡಿಂಗ್ ಸೌಲಭ್ಯವು ಇದೇ ಮೊದಲನೆಯದು. ಮಧ್ಯಾಹ್ನ ಪ್ರಧಾನಿ ಅವರು ಗುವಾಹಟಿಯಲ್ಲಿ ೫ ಸಾವಿರದ ೪೫೦ ಕೋಟಿ ರೂಪಾಯಿಗಳಿಗಿಂತ ಹೆಚ್ಚು ಮೌಲ್ಯದ ವಿವಿಧ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ.

**********

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಚಂಡೀಗಢದ ಸೆಕ್ಟರ್ ೪೩ರಲ್ಲಿ ಪ್ರಧಾನಮಂತ್ರಿ ಇ-ಬಸ್ ಸೇವಾ ಯೋಜನೆಯಡಿ ಹೊಸ ಎಲೆಕ್ಟ್ರಿಕ್ ಬಸ್‌ಗಳಿಗೆ ವರ್ಚುಯಲ್ ಮೂಲಕ ಚಾಲನೆ ನೀಡಲಿದ್ದಾರೆ. ಪಿಎಂ-ಇ-ಬಸ್ ಸೇವಾ ಯೋಜನೆಯು ೨೦೨೩ರ ಆಗಸ್ಟ್‌ನಲ್ಲಿ ಪ್ರಾರಂಭವಾದ ಕೇಂದ್ರ ಸರ್ಕಾರದ ಉಪಕ್ರಮವಾಗಿದ್ದು, ಸಾರ್ವಜನಿಕ-ಖಾಸಗಿ ಸಹಭಾಗಿತ್ವ ಮಾದರಿಯ ಮೂಲಕ ೧೬೯ ನಗರಗಳಲ್ಲಿ ೧೦ ಸಾವಿರ ಎಲೆಕ್ಟ್ರಿಕ್ ಬಸ್‌ಗಳನ್ನು ನಿಯೋಜಿಸಲು ಉದ್ದೇಶಿಸಲಾಗಿದೆ. ಒಟ್ಟು ೫೭ ಸಾವಿರದ ೬೧೩ ಕೋಟಿ ರೂಪಾಯಿಗಳ ವೆಚ್ಚದೊಂದಿಗೆ, ಈ ಯೋಜನೆಯು ಹಸಿರು ನಗರ ಚಲನಶೀಲತೆಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿದ್ದು, ಸಂಘಟಿತ ಬಸ್ ಸೇವೆಗಳ ಕೊರತೆಯಿರುವ ನಗರಗಳ ಮೇಲೆ ಕೇಂದ್ರೀಕರಿಸುತ್ತದೆ ಮತ್ತು ಡಿಪೋ ಮೂಲಸೌಕರ್ಯ ಅಭಿವೃದ್ಧಿಯನ್ನು ಒಳಗೊಂಡಿದೆ.

**********

ನವದೆಹಲಿಯಲ್ಲಿ ಈ ತಿಂಗಳ ೧೬ ರಿಂದ ೨೦ ರವರೆಗೆ ನಡೆಯಲಿರುವ ಇಂಡಿಯಾ-ಎಐ ಇಂಪ್ಯಾಕ್ಟ್ ಶೃಂಗಸಭೆ ೨೦೨೬ ರಲ್ಲಿ ಪ್ರಮುಖ ವಿಶ್ವ ನಾಯಕರು ಭಾಗವಹಿಸಲಿದ್ದಾರೆ. ಶೃಂಗಸಭೆಯಲ್ಲಿ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್, ಬ್ರೆಜಿಲ್ ಅಧ್ಯಕ್ಷ ಲೂಯಿಜ್ ಇನಾಸಿಯೊ ಲುಲಾ ಡ ಸಿಲ್ವಾ ಮತ್ತು ಗ್ರೀಸ್ ಪ್ರಧಾನಿ ಕಿರಿಯಾಕೋಸ್ ಮಿಟ್ಸೋಟಾಕಿಸ್ ಭಾಗವಹಿಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆಪ್ರಧಾನಿ ನರೇಂದ್ರ ಮೋದಿಯವರ ಆಹ್ವಾನದ ಮೇರೆಗೆ, ಇತರ ಹಲವಾರು ನಾಯಕರು ಸಹ ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ. ಇದರಲ್ಲಿ ನೆದರ್ಲ್ಯಾಂಡ್ಸ್ ಪ್ರಧಾನಿ ಡಿಕ್ ಸ್ಕೂಫ್, ಶ್ರೀಲಂಕಾ ಅಧ್ಯಕ್ಷ ಅನುರಾ ಕುಮಾರ ದಿಸಾನಾಯಕ, ಭೂತಾನ್ ಪ್ರಧಾನಿ ತ್ಸೆರಿಂಗ್ ಟೋಬ್ಗೆ ಮತ್ತು ಮಾರಿಷಸ್ ಪ್ರಧಾನಿ ನವೀನ್ಚಂದ್ರ ರಾಮ್ಗೂಲಮ್ ಸೇರಿದ್ದಾರೆ. ಅಲ್ಲದೇ ಶೃಂಗಸಭೆಯಲ್ಲಿ ಸ್ಪೇನ್ ಅಧ್ಯಕ್ಷ ಪೆಡ್ರೊ ಸ್ಯಾಂಚೆಜ್ ಪೆರೆಜ್-ಕ್ಯಾಸ್ಟೆಜಾನ್, ಅಬುಧಾಬಿಯ ರಾಜಕುಮಾರ ಶೇಖ್ ಖಲೀದ್ ಬಿನ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್, ಕ್ರೊಯೇಷಿಯಾ ಪ್ರಧಾನಿ ಆಂಡ್ರೆಜ್ ಪ್ಲೆಂಕೋವಿಕ್, ಎಸ್ಟೋನಿಯಾ ಅಧ್ಯಕ್ಷ ಅಲರ್ ಕರಿಸ್, ಫಿನ್‌ಲ್ಯಾಂಡ್ ಪ್ರಧಾನಿ ಪೆಟ್ಟೇರಿ ಓರ್ಪೊ, ಕಝಾಕಿಸ್ತಾನ್ ಪ್ರಧಾನಿ ಓಲ್ಜಾಸ್ ಬೆಕ್ಟೆನೋವ್, ಲಿಚ್ಟೆನ್‌ಸ್ಟೈನ್ ಆನುವಂಶಿಕ ರಾಜಕುಮಾರ ಅಲೋಯಿಸ್, ಸ್ಲೋವಾಕಿಯಾ ಅಧ್ಯಕ್ಷ ಪೀಟರ್ ಪೆಲ್ಲೆಗ್ರಿನಿ, ಸ್ವಿಟ್ಜರ್ಲೆಂಡ್ ಅಧ್ಯಕ್ಷ ಗೈ ಪಾರ್ಮೆಲಿನ್, ಬೊಲಿವಿಯಾ ಉಪಾಧ್ಯಕ್ಷ ಎಡ್ಮಂಡ್ ಲಾರಾ ಮೊಂಟಾನೊ, ಗಯಾನಾ ಉಪಾಧ್ಯಕ್ಷ ಭರತ್ ಜಗದಿಯೊ, ಸೆರ್ಬಿಯಾ ಉಪಾಧ್ಯಕ್ಷ ಅಲೆಕ್ಸಾಂಡರ್ ವುಸಿಕ್ ಮತ್ತು ಸೀಶೆಲ್ಸ್ ಉಪಾಧ್ಯಕ್ಷ ಸೆಬಾಸ್ಟಿಯನ್ ಪಿಳ್ಳೆ ಪಾಲ್ಗೊಳ್ಳಲಿದ್ದಾರೆ.ಇದೇ ವೇಳೆ ೪೫ ಕ್ಯೂ

ಹೆಚ್ಚು ದೇಶಗಳ ನಿಯೋಗಗಳು ಶೃಂಗಸಭೆಯಲ್ಲಿ ಭಾಗವಹಿಸಲಿವೆ. ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಮತ್ತು ಹಲವಾರು ಅಂತಾರಾಷ್ಟ್ರೀಯ ಸಂಸ್ಥೆಗಳ ಹಿರಿಯ ಅಧಿಕಾರಿಗಳು ಸಹ ಚರ್ಚೆಗಳಲ್ಲಿ ಭಾಗವಹಿಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

**********

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮಾಡಿರುವ ಆರೋಪಗಳನ್ನು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಶ್ ಗೋಯಲ್ ತಿರಸ್ಕರಿಸಿದ್ದಾರೆ. ಭಾರತ-ಅಮೆರಿಕ ವ್ಯಾಪಾರ ಒಪ್ಪಂದದ ಕುರಿತು ರಾಹುಲ್ ಗಾಂಧಿ ಹಂಚಿಕೊಂಡ ವೀಡಿಯೊ ಆರೋಪಕ್ಕೆ ಪ್ರತಿಕ್ರಿಯಿಸಿರುವ ಸಚಿವ ಪಿಯೂಶ್ ಗೋಯಲ್, ರೈತ ಪ್ರತಿನಿಧಿಗಳಂತೆ ನಟಿಸುತ್ತಿರುವ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರೊಂದಿಗೆ ರಾಹುಲ್ ಗಾಂಧಿ ಆರೋಪಗಳನ್ನು ಮಾಡಿದ್ದಾರೆ ಎಂದು ದೂರಿದ್ದಾರೆ. ರಾಹುಲ್ ಗಾಂಧಿ ಅವರ ಈ ಹೇಳಿಕೆಗಳು ಸಂಪೂರ್ಣವಾಗಿ ಆಧಾರರಹಿತ. ಅವರು ದೇಶದ ಅನ್ನದಾತರನ್ನು ದಾರಿ ತಪ್ಪಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದ ಕೇಂದ್ರ ಸಚಿವರು, ರೈತರ ಹಿತಾಸಕ್ತಿಗಳನ್ನು ಕೇಂದ್ರ ಸರ್ಕಾರವು ಸಂಪೂರ್ಣವಾಗಿ ಕಾಪಾಡಿದೆ ಎಂದು ಪ್ರತಿಪಾದಿಸಿದ್ದಾರೆ.

*****ಧ್ವನಿ****ಪಿಯೂಶ್ ಗೋಯಲ್

**********

ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ಇಂದು ಚೆನ್ನೈನಲ್ಲಿ ಸಂಶೋಧನಾ ಉದ್ಯಮ, ನವೋದ್ಯಮ ಮತ್ತು ಉದ್ಯಮಶೀಲತಾ ಸಮಾವೇಶವನ್ನು ಉದ್ಘಾಟಿಸಲಿದ್ದಾರೆ. ಚೆನ್ನೈ ಮತ್ತು ಕಾರೈಕುಡಿಯಲ್ಲಿರುವ ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಘಟಕಗಳ ಮಂಡಳಿಯು ಎರಡು ದಿನಗಳ ಈ ಸಮಾವೇಶವನ್ನು ಆಯೋಜಿಸಿದೆ. ಈ ಕುರಿತು ಮಾಧ್ಯಮಗಳೊಂದಿಗೆ ಮಾಹಿತಿ ಹಂಚಿಕೊಂಡಿರುವ ಚೆನ್ನೈನ ಸ್ಟ್ರಕ್ಚರಲ್ ಎಂಜಿನಿಯರಿಂಗ್ ಸಂಶೋಧನಾ ಕೇಂದ್ರದ ನಿರ್ದೇಶಕಿ ಡಾ.ಎನ್. ಆನಂದವಲ್ಲಿ, ನವೋದ್ಯಮಗಳು, ಎಂಎಸ್ಎಂಇಗಳು, ಕೈಗಾರಿಕಾ ಉದ್ಯಮಿಗಳು, ಶೈಕ್ಷಣಿಕ ಮತ್ತು ಸಂಶೋಧನಾ ಸಂಸ್ಥೆಗಳು ಮತ್ತು ಸಾರ್ವಜನಿಕರಿಗೆ ನಾವೀನ್ಯತೆ ನೇತೃತ್ವದ ಬೆಳವಣಿಗೆಯನ್ನು ಉತ್ತೇಜಿಸಲು ಸಾಮಾನ್ಯ ವೇದಿಕೆಯನ್ನು ರಚಿಸುವ ಗುರಿಯನ್ನು ಈ ಸಮಾವೇಶ ಹೊಂದಿದೆ ಎಂದು ಹೇಳಿದ್ದಾರೆ. ರಚನಾತ್ಮಕ ಸಹಯೋಗವನ್ನು ಬಲಪಡಿಸಲು ಸಮಾವೇಶದ ಸಮಯದಲ್ಲಿ ಸಿಎಸ್ಐಆರ್ ಮತ್ತು ಶೈಕ್ಷಣಿಕ ಸಂಸ್ಥೆಗಳು ಮತ್ತು ಅವುಗಳ ಇನ್ಕ್ಯುಬೇಶನ್ ಕೇಂದ್ರಗಳ ನಡುವೆ ತಿಳಿವಳಿಕೆ ಒಪ್ಪಂದವೊಂದನ್ನು

ವಿನಿಮಯ ಮಾಡಿಕೊಳ್ಳಲಾಗುವುದು. ೧೦೦ ಕ್ಕೂ ಹೆಚ್ಚು ಪ್ರದರ್ಶಕರು ಸಮಾವೇಶದಲ್ಲಿ ಭಾಗವಹಿಸುವ ನಿರೀಕ್ಷೆಯಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

**********

ಕೊಲೊಂಬೊದ ಆರ್.ಪ್ರೇಮದಾಸ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್ -೨೦೨೬ ರ 'ಬಿ' ಗುಂಪಿನ ೧೯ನೇ ಪಂದ್ಯದಲ್ಲಿ ಆಸ್ಟ್ರೇಲಿಯಾ ವಿರುದ್ಧ ಜಿಂಬಾಂಬ್ವೆ ೨೩ ರನ್‌ಗಳಿಂದ ಭರ್ಜರಿ ಜಯ ಸಾಧಿಸಿದೆ. ಮೊದಲ ಬ್ಯಾಟಿಂಗ್ ಮಾಡಿದ ಜಿಂಬಾಂಬ್ವೆ, ನಿಗದಿತ ೨೦ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೧೬೯ ರನ್ ಗಳಿಸಿತು. ೧೭೦ ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ಆಸ್ಟ್ರೇಲಿಯಾ, ೧೯.೩ ಓವರ್‌ಗಳಲ್ಲಿ ೧೪೬ ರನ್‌ಗಳಿಗೆ ತನ್ನೆಲ್ಲಾ ವಿಕೆಟ್ ಕಳೆದುಕೊಂಡಿತು. ಜಿಂಬಾಂಬ್ವೆ ಪರ ೪ ವಿಕೆಟ್ ಕಬಳಿಸಿದ ಬ್ಲೆಸಿಂಗ್ ಮುಜರಾಬಾನಿ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ದೆಹಲಿಯ ಅರುಣ್ ಜೇಂಟ್ಲಿ ಕ್ರೀಡಾಂಗಣದಲ್ಲಿ ನಿನ್ನೆ ನಡೆದ 'ಡಿ' ಗುಂಪಿನ ೨೦ನೇ ಪಂದ್ಯದಲ್ಲಿ ಕೆನಡಾ ವಿರುದ್ಧ ಯುಎಇ ೫ ವಿಕೆಟ್‌ಗಳಿಂದ ಜಯ ದಾಖಲಾಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಕೆನಡಾ ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೧೫೦ ರನ್ ಗಳಿಸಿತು. ಗೆಲುವಿನ ಗುರಿ ಬೆನ್ನತ್ತಿದ ಯುಎಇ, ೧೯.೪ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೧೫೧ ರನ್ ಗಳಿಸಿ, ಗೆಲುವಿನ ನಗೆ ಬೀರಿತು. ಚೆನ್ನೈನ ಎಂ.ಎ.ಚಿದಂಬರಂ ಕ್ರೀಡಾಂಗಣದಲ್ಲಿ ನಿನ್ನೆ ನಡೆದ 'ಎ' ಗುಂಪಿನ ೨೧ನೇ ಪಂದ್ಯದಲ್ಲಿ ನೆದರ್‌ಲ್ಯಾಂಡ್ಸ್ ವಿರುದ್ಧ ಅಮೆರಿಕ ತಂಡ ೯೩ ರನ್‌ಗಳಿಂದ ಭರ್ಜರಿ ಗೆಲುವು ಸಾಧಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಅಮೆರಿಕ, ನಿಗದಿತ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೯೬ ರನ್ ಗಳಿಸಿತು. ಗೆಲುವಿನ ಗುರಿ ಬೆನ್ನತ್ತಿದ ನೆದರ್‌ಲ್ಯಾಂಡ್ಸ್ ೧೫.೫ ಓವರ್‌ಗಳಲ್ಲಿ ೧೦೩ ರನ್‌ಗಳಿಗೆ ತನ್ನೆಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿತು. ಅಮೆರಿಕ ಪರ ನಾಲ್ಕು ವಿಕೆಟ್‌ಗಳನ್ನು ಕಬಳಿಸಿದ ಹರ್ಮೀತ್ ಸಿಂಗ್ ಪಂದ್ಯ ಶ್ರೇಷ್ಠ ಗೌರವಕ್ಕೆ ಭಾಜನರಾದರು.

**********

೨೦೨೬ ರ ಅಬುಧಾಬಿ ಓಪನ್ ಮಾಸ್ಟರ್ಸ್ ಗೇಮ್ಸ್‌ನ ಪುರುಷರ ಹ್ಯಾಮರ್ ಥ್ರೋ ವಿಭಾಗದಲ್ಲಿ ಭಾರತೀಯ ಕ್ರೀಡಾಪಟುಗಳು ಅದ್ಭುತ ಪ್ರದರ್ಶನ ನೀಡಿದ್ದಾರೆ. ಹಿರಿಯರ ಅಥ್ಲೆಟ್ಸ್ ವಿಭಾಗದಲ್ಲಿ ಕಿಶೋರ ಕುಮಾರ್ ಚಂದ್ರಿರಾ ಮೋಗನ್ ಚಿನ್ನ ಮತ್ತು ಮೊಹಮ್ಮದ್ ಅನ್ಸಾರ್ ಕಂಚಿನ ಪದಕ ಗೆದ್ದರು. ಕಿಶೋರ ಕುಮಾರ್ ೩೭.೯೨ ಮೀಟರ್ ದೂರ ಎಸೆದು ಅಗ್ರ ಸ್ಥಾನ ಪಡೆದರು. ಮೊಹಮ್ಮದ್ ಅನ್ಸಾರ್, ಮೂರನೇ ಸ್ಥಾನಕ್ಕೆ ತೃಪ್ತರಾದರು.

**********

ನವದೆಹಲಿಯಲ್ಲಿ ನಡೆದ ೨೦೨೬ರ ಏಷ್ಯನ್ ಶೂಟಿಂಗ್ ಚಾಂಪಿಯನ್‌ಶಿಪ್‌ನ ಹಿರಿಯರ ರೈಫಲ್ ಮತ್ತು ಪಿಸ್ತೂಲ್ ಸ್ಪರ್ಧೆಗಳಲ್ಲಿ ಭಾರತ ೧೩ ಚಿನ್ನ, ೧೧ ಬೆಳ್ಳಿ ಮತ್ತು ೯ ಕಂಚಿನ ಪದಕಗಳೊಂದಿಗೆ ಒಟ್ಟು ೩೩ ಪದಕಗಳನ್ನು ಗಳಿಸಿತು. ೨೫ ಮೀಟರ್ ಸೆಂಟರ್ ಫೈರ್ ಪಿಸ್ತೂಲ್‌ನಲ್ಲಿ ಅಮನ್‌ಪ್ರೀತ್ ಸಿಂಗ್ ಚಿನ್ನ ವಿಜೇತರಾದರು. ಗುರುಪ್ರೀತ್ ಸಿಂಗ್ ೫೮೪ ಅಂಕಗಳೊಂದಿಗೆ ಬೆಳ್ಳಿ ಹಾಗೂ ಅಂಕುರ್ ಗೋಯೆಲ್ ೫೭೦ ಅಂಕಗಳೊಂದಿಗೆ ಕಂಚಿನ ಪದಕ ಗೆದ್ದರು. ಮಹಿಳೆಯರ ೫೦ ಮೀಟರ್ ರೈಫಲ್ ಪ್ರೋನ್ ಸ್ಪರ್ಧೆಯಲ್ಲಿ ಭಾರತದ ಸಿಫ್ಟ್ ಕೌರ್ ಸಮ್ರಾ ೬೨೩.೨ ಅಂಕಗಳೊಂದಿಗೆ ಬೆಳ್ಳಿ ಹಾಗೂ ತೇಜಸ್ವಿನಿ ಸಾವಂತ್ ೬೨೧.೦ ಅಂಕಗಳೊಂದಿಗೆ ಕಂಚಿನ ಪದಕ ಗೆದ್ದರು. ಮಹಿಳಾ ತಂಡ ಸ್ಪರ್ಧೆಯಲ್ಲಿ, ಸಿಫ್ಟ್ ಕೌರ್ ಸಮ್ರಾ, ತೇಜಸ್ವಿನಿ ಸಾವಂತ್ ಮತ್ತು ಮಾನಿನಿ ಕೌಶಿಕ್ ಒಟ್ಟು ೧೮೬೨.೯ ಅಂಕಗಳೊಂದಿಗೆ ಚಿನ್ನದ ಪದಕ ವಿಜೇತರಾದರು.

**********